ಓ .ಎಸ್ . ನಂ. 293 /2012 ಪಿಡಬ್ಲ್ಯೂ 2
ಸಿದ್ಧಾರ್ಥ

ದಿನಾಂಕ : 04.08.2025 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ – ಶ್ರೀ ಡಿ ಎಸ್ ಬಿ ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿ ಪರ ಸಾಕ್ಷಿಯಾಗಿರುತ್ತೇನೆ. ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿರುತ್ತದೆ ಮತ್ತು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

**ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಎಸ್ ಆರ್ ಎ ವಕೀಲರಿಂದ**

ನಾನು ನನ್ನ ಪ್ರಮಾಣಪತ್ರದಲ್ಲಿ ಸಲ್ಲಿಸಿರುವ ಅಂಶಗಳಿಗೆ ಸಂಬಂಧಿಸಿದ ದಾಖಲೆಗಳನ್ನು ನೋಡಿರುತ್ತೇನೆ. ನನ್ನ ಪ್ರಮಾಣಪತ್ರದ ಪ್ಯಾರಾ ನಂಬರ್ 4 ರಲ್ಲಿ ಬರೆಸಿರುವ ಆಧಾರ ಭೋಗ್ಯವನ್ನು ಯಾವ ವರ್ಷ ಮಾಡಿಸಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ಸದರಿ ಆಧಾರ ಭೋಗ್ಯಕ್ಕೆ ಸಂಬಂಧಿಸಿದ ದಾಖಲೆಗಳನ್ನು ನಾನು ನೋಡಿರುತ್ತೇನೆ. ಸದರಿ ಆಧಾರ ಭೋಗ್ಯಕ್ಕೆ ಸಂಬಂಧಿಸಿದ ದಾಖಲೆಗಳು ನೋಂದಾಯಿತ ದಾಖಲೆಗಳಾಗಿರುತ್ತವೆ. 2ನೇ ಪ್ರತಿವಾದಿಗೆ ದಾವಾಸ್ತಿಯನ್ನು ಯಾವಾಗ ಮಾರಾಟ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. 6ನೇ ವಾದಿ ನನ್ನ ಸಂಬಂಧಿಕರಾಗಿರುತ್ತಾರೆ. ವಾದಿಗಳು ಯಾವ ಯಾವ ಸ್ವತ್ತಿನ ಮೇಲೆ ಹಾಗೂ ಯಾವ ಪರಿಹಾರ ಕೋರಿ ದಾವೆ ಸಲ್ಲಿಸಿರುತ್ತಾರೆ ಎಂದು ನನಗೆ ತಿಳಿದಿರುತ್ತದೆಯೇ ಎಂದರೆ ಸಾಕ್ಷಿಯು ಒಂದು ಮನೆ ಮತ್ತು ಖಾಲಿ ನಿವೇಶನಕ್ಕೆ ಸಂಬಂಧಿಸಿದಂತೆ ದಾವೆ ಹೂಡಿದ್ದು ಆದರೆ ನನಗೆ ನಿಖರವಾದ ಮಾಹಿತಿ ಇರುವುದಿಲ್ಲ ಎಂದು ನುಡಿಯುತ್ತಾರೆ.

ನಾನು ನನ್ನ ಪ್ರಮಾಣಪತ್ರದಲ್ಲಿ ಬರೆಸಿರುವ 1 ಮತ್ತು 2 ನೇ ಪ್ರತಿವಾದಿಗಳು ನಿಂಗರಾಜು ಮತ್ತು ರಮೇಶ್ ರವರುಗಳಾಗಿರುತ್ತಾರೆ. ವಾದಿಗಳು ಸಮಪಾಲು ಕೋರಿ ಹಾಗೂ ವಾದಿಗಳ ಗಮನಕ್ಕೆ ಬರದೇ ದಾವಾಸ್ತಿ ಮಾರಾಟವಾಗಿರತ್ತದೆ ಎಂದು ಈ ದಾವೆಯನ್ನು ಸಲ್ಲಿಸಿರುತ್ತಾರೆ. ವಾದಿಗಳ ಗಮನಕ್ಕೆ ಬರದೇ ದಾವಾಸ್ತಿ ಮಾರಾಟವಾಗಿರುವ ಸ್ವತ್ತು ಯಾವಾಗ ಎಂದು ನನಗೆ ಹೇಳಲು ಆಗುವುದಿಲ್ಲ. ದಾವಾ ಸ್ವತ್ತು 3 ಮತ್ತು 4ನೇ ಪ್ರತಿವಾದಿಗಳ ಸ್ವಾಧೀನದಲ್ಲಿ ಇರುತ್ತದೆ ಎಂದರೆ ಸರಿ. 3 ಮತ್ತು 4ನೇ ಪ್ರತಿವಾದಿಗಳು ದಾವಾಸ್ತಿಯಲ್ಲಿ 20 ರಿಂದ 30

ವರ್ಷಗಳಿಗೆ ಮೇಲ್ಪಟ್ಟು ಸ್ವಾಧೀನದಲ್ಲಿರುತ್ತಾರೆ. 6ನೇ ವಾದಿಗೆ ನಾನು ಮಾವನಾಗಿರುವುದರಿಂದ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಕೊಳ್ಳೇಗಾಲ